# ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ

## ಸಿ.ಸಿ ನಂಃ 970/2013

| | | | |
|---|---|---|---|
| **ಚಾಸಾ ಃ** | **7** | **ಪ್ರಾಸಾಃ-** | **6** |

| | |
|---|---|
| ಹೆಸರು | ಶ್ಯಾಮ್ |
| ತಂದೆಯ ಹೆಸರು | ಮಹದೇವ್ |
| ವಯಸ್ಸು | 42 |
| ಉದ್ಯೋಗ | ಪಿ.ಐ, ಎಲೆಕ್ಟ್ರನಿಕ್ ಸಿಟಿ ಟ್ರಾಫಿಕ್ ಬೆಂಗಳೂರು |
| ವಿಳಾಸ | ಬೆಂಗಳೂರು |

- - - - - - - - - - - - - - - - - - - - - - - - - - - - - -

**ದಿಃ09.10.2023ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ನಾನು ದಿ.10.09.2009 ರಿಂದ ದಿ.24.07.2012 ರ ವರೆಗೆ ಅರಕ್ಷಕ ಉಪನಿರೀಕ್ಷಕರು ಎಂದು ಹಾರೋಹಳ್ಳಿ ಪೊಲೀಸ್ ಠಾಣೆಯಲ್ಲಿ ಕರ್ತವ್ಯ ನಿರ್ವಹಿಸಿರುತ್ತೇನೆ.

ದಿನಾಂಕ.27.04.2012 ರಂದು ಪಿಎಸ್ಐ ಶ್ರೀ ವಿನೋದ್ ಭಟ್ ಇವರಿಂದ ಕಡತವನ್ನು ಪಡೆದುಕೊಂಡು ಮುಂದಿನ ತನಿಖೆ ಕೈಗೊಂಡಿರುತ್ತೇನೆ. ದಿನಾಂಕ.08.05.2012 ರಂದು ನ್ಯಾಯಾಲಯದ ಅನುಮತಿ ಪಡೆದು ಕೃತ್ಯ ಸ್ಥಳದ ಆಧಾರದ ಮೇಲೆ ಕನಕಪುರ ಪುರ ಪೊಲೀಸ್ ಠಾಣೆಗೆ ಕಡತವನ್ನು ವರ್ಗಾವಣೆ ಮಾಡಿರುತ್ತೇನೆ. ಸದರಿ ಅರಕ್ಷಕ ಉಪನಿರೀಕ್ಷಕರು, ಕನಕಪುರ ಪೊಲೀಸ್ ಠಾಣೆಗೆ ನಿವೇದಿಸಿಕೊಂಡ ಪತ್ರವನ್ನು ನಿಪಿ-10 ಎಂದು, ಸಾಕ್ಷಿಯ ಸಹಿಯನ್ನು ನಿಪಿ-10(ಎ) ಮತ್ತು 10(ಬಿ) ಎಂದು ಗುರುತಿಸಲಾಯಿತು.

ಸದರಿ ಪತ್ರದಲ್ಲಿ ನಮೂದಿಸಿರುವ ನಕಲು ದಾಖಲೆಗಳನ್ನು ಕನಕಪುರ ಪುರ ಪೊಲೀಸ್ ಠಾಣೆಗೆ ನೀಡಿರುತ್ತೇನೆ.

**ಪಾಟೀ ಸವಾಲು ಶ್ರೀ ವಿಎಸ್ ಎಸ್ ಆರೋಪಿ ಪರ ವಕೀಲರಿಂದಃ-**

ನ್ಯಾಯಾಲಯದ ಪರವಾನಿಗೆ ಪಡೆದು ಯಾವುದೇ ಕಡತ ಮತ್ತು ದಾಖಲೆಯನ್ನು ಕನಕಪುರ ಪುರ ಪೊಲೀಸ್ ಠಾಣೆಗೆ ವರ್ಗಾವಣೆ ಮಾಡಿರುವುದಿಲ್ಲ ಎಂದರೆ ಸರಿಯಲ್ಲ. ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇರುವುದಿಲ್ಲ ಎಂದರೆ ಸರಿಯಲ್ಲ. ಪಿರ್ಯಾದಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಮರುವಿಚಾರಣೆ ಃಇಲ್ಲ**

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ ಎಂ ಎಫ್ ಸಿ ರವರ ನ್ಯಾಯಾಲಯ, ಕನಕಪುರ**

**ಸಿ.ಸಿ ನಂಃ 970/2013**

| | | | |
|---|---|---|---|
| **ಚಾಸಾ ಃ** | **6** | **ಪ್ರಾಸಾಃ-** | **7** |

ಹೆಸರು ರಾಮನಾಯಕ್

ತಂದೆಯ ಹೆಸರು ಬಾಲ್ಯನಾಯಕ್

ವಯಸ್ಸು 39

ಉದ್ಯೋಗ ವ್ಯಾಪಾರ

ವಿಳಾಸ ಕನಕಪುರ

- - - - - - - - - - - - - - - - - - - - - - - - - - - - - -

**ದಿಃ09.10.2023ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯವಿಚಾರಣೆ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಆರೋಪಿತನ ಪರಿಚಯವಿಲ್ಲ. ಈ ಪ್ರಕರಣದ ಬಗ್ಗೆ ಯಾವುದೇ ಮಾಹಿತಿ ಇಲ್ಲ.

ಪೊಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆಯನ್ನು ಜರುಗಿಸಿಲ್ಲ. ನನಗೆ ಈಗ ತೋರಿಸಿದ ಒಂದು ದಾಖಲೆಯಲ್ಲಿ ನನ್ನ ಸಹಿ ಇರುತ್ತದೆ. ಆ ದಾಖಲೆಯು ಪಂಚನಾಮೆಯಾಗಿದ್ದು, ಅದನ್ನು ಈಗಾಗಲೇ ನಿಪಿ-1 ಎಂದು ಗುರುತಿಸಲಾಗಿದ್ದು, ಅದರಲ್ಲಿರುವ ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು.

ನಿಪಿ-1 ರಲ್ಲಿ ಬರೆದ ವಿಚಾರಗಳು ನನಗೆ ಗೊತ್ತಿಲ್ಲ.

**ಈ ಹಂತದಲ್ಲಿ ಸಾಕ್ಷಿಯು ಅಭಿಯೋಜನೆಯ ಪ್ರಕರಣಕ್ಕೆ ವಿರುದ್ದವಾಗಿ ಸಾಕ್ಷ್ಯ ನುಡಿದಿರುವುದರಿಂದ ಅವರನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲನ್ನು ಮಾಡಲು ಮಾನ್ಯ ಎಪಿಪಿ ರವರು ಅನುಮತಿಯನ್ನು ಕೋರಿದ್ದು, ಅನುಮತಿಯನ್ನು ನೀಡಲಾಯಿತು.**

**ಪಾಟೀ ಸವಾಲು ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ದಿನಾಂಕ.11.05.2012 ರಂದು ಬೆಳಿಗ್ಗೆ 10ಃ30 ರಿಂದ 11ಃ00 ಗಂಟೆ ಸಮಯದಲ್ಲಿ ಉಪನೋಂದಣಾಧಿಕಾರಿಗಳ ಕಚೇರಿಯಲ್ಲಿ ಪೋಲೀಸರು ನಿಪಿ-1 ರಂತೆ ಪಂಚನಾಮ ಕ್ರಮ ಜರುಗಿಸಿ ನನ್ನ ಸಹಿ ಪಡೆದಿರುತ್ತಾರೆಂದರೆ ಸರಿಯಲ್ಲ.

ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**ಪಾಟೀ ಸವಾಲು ಆರೋಪಿತರ ಪರ ವಕೀಲರಿಂದಃ-**

ಆರೋಪಿ ಪರ ವಕೀಲರು ತಮ್ಮ ಪಾಟೀ ಸವಾಲು ಇಲ್ಲ ಎಂದು ತಿಳಿಸಿರುತ್ತಾರೆ.

**ಮರುವಿಚಾರಣೆ ಃ**ಇಲ್ಲ

**(ಸಾಕ್ಷಿಯ ವಿಚಾರಣೆಯನ್ನು ನಾನು ತೆರೆದ ನ್ಯಾಯಾಲಯದಲ್ಲಿ ಪಡೆದುಕೊಂಡಿರುತ್ತೇನೆ ಎಂದು ದೃಡಿಕರೀಸುತ್ತೇನೆ.)**

**ಓ ಹೇ ಕೇ ಸ ಇ**

**ಪ್ರಧಾನ ಸಿವಿಲ್ ನ್ಯಾಯಾಧೀಶರು**
**ಮತ್ತು ಜೆಎಂಎಫ್‌ಸಿ ಕನಕಪುರ.**